# ಕರ್ನಾಟಕ ಸರ್ಕಾರ

ಸಂಖ್ಯೆ:ಪಪೂಶಿಇ/ಶೈ.ಶಾ./ಕೇ.ಮಾ.ಸಂ.ಅ.ಸ.ವಿ.ವೇ.2015/2015-16

ನಿರ್ದೇಶಕರ ಕಛೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
18ನೇ ಕ್ರಾಸ್, ಸಂಪಿಗೆ ರಸ್ತೆ,
ಮಲ್ಲೇಶ್ವರಂ, ಬೆಂಗಳೂರು-12.
ದಿನಾಂಕ:09-10-2015.

## 2015ರ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಲು ದಿನಾಂಕ ವಿಸ್ತರಣೆ ಕುರಿತು

ಕೇಂದ್ರ ಮಾನವ ಸಂಪನ್ಮೂಲ ಅಭಿವೃದ್ಧಿ ಮಂತ್ರಾಲಯ (M.H.R.D), ಉನ್ನತ ಶಿಕ್ಷಣ ಇಲಾಖೆ, ಕೇಂದ್ರ ಸರ್ಕಾರ, ನವದೆಹಲಿ ಇವರ ವತಿಯಿಂದ 2015ರ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ 80$^{th}$ Percentile ಗಿಂತ ಹೆಚ್ಚು ಅಂಕಗಳಿಸಿದ ಹಾಗೂ **ತಮ್ಮ ವಿದ್ಯಾಭ್ಯಾಸವನ್ನು ಕಡ್ಡಾಯವಾಗಿ ಉನ್ನತ ಶಿಕ್ಷಣದಲ್ಲಿ ಮುಂದುವರಿಸಿರುವಂತಹ(ಕನಿಷ್ಠ 03 ವರ್ಷದ ಪದವಿ ತರಗತಿಗೆ ದಾಖಲಾಗಿರುವ)** ವಿದ್ಯಾರ್ಥಿಗಳಿಂದ Central Sector Scheme of Scholorship for College and University Studentsಗಳಿಗೆ online ಮೂಲಕ ಅರ್ಜಿ ಸಲ್ಲಿಸುವಂತೆ ಸೂಚಿಸಲಾಗಿರುತ್ತದೆ. ಈ ಸಂಬಂಧವಾಗಿ ಕೇಂದ್ರ ಸರ್ಕಾರದ ವತಿಯಿಂದ website:**www.scholarships.gov.in**ನ **National e-Scholarship Portal**ನಲ್ಲಿ ಹೊಸ ತಂತ್ರಾಂಶವನ್ನು ಅಳವಡಿಸಲಾಗಿರುತ್ತದೆ. ಆದಕಾರಣ, ಈ portalನಲ್ಲಿಯೇ **2015ರ Fresh Batchನ ವಿದ್ಯಾರ್ಥಿಗಳು ಮಾತ್ರ ಅರ್ಜಿಗಳನ್ನು "online" ಮೂಲಕ ಸಲ್ಲಿಸುವಂತೆ ಈಗಾಗಲೇ ತಿಳಿಸಲಾಗಿರುತ್ತದೆ.**

ವಿದ್ಯಾರ್ಥಿಗಳು **"online" ಮೂಲಕ** ಸಲ್ಲಿಸಿದ ಎಲ್ಲಾ ದಾಖಲೆಗಳನ್ನು (ಮೂಲ ದಾಖಲೆಗಳ ಜೊತೆಯಲ್ಲಿ) ಪರಿಶೀಲನೆಗಾಗಿ ತಾವು ಅಧ್ಯಯನ ಮಾಡುತ್ತಿರುವ ಕಾಲೇಜುಗಳ ಪ್ರಾಚಾರ್ಯರುಗಳಿಗೆ ಸಲ್ಲಿಸಲು **ದಿನಾಂಕ:09-10-2015** ಕೊನೆಯ ದಿನಾಂಕವೆಂದು ನಿಗದಿಪಡಿಸಲಾಗಿತ್ತು.

ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಲು ಹೆಚ್ಚಿನ ಅವಕಾಶ ಕಲ್ಪಿಸುವ ಉದ್ದೇಶದಿಂದ ಅರ್ಹ ವಿದ್ಯಾರ್ಥಿಗಳು ಕಾಲೇಜಿನ ಪ್ರಾಂಶುಪಾಲರುಗಳಿಗೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು **ದಿನಾಂಕ:30-10-2015ರವರೆಗೆ** ವಿಸ್ತರಿಸಲಾಗಿದೆ.

ಅಂತೆಯೇ, ಪ್ರಾಚಾರ್ಯರುಗಳು, **"online" ಮೂಲಕ** ವಿದ್ಯಾರ್ಥಿಗಳು ಸಲ್ಲಿಸಿರುವ ಅರ್ಜಿಗಳನ್ನು **"online"**ನಲ್ಲಿ ಕೂಲಂಕುಷವಾಗಿ ಪರಿಶೀಲಿಸಿ, ಸದರಿ ವಿದ್ಯಾರ್ಥಿಯು ತಮ್ಮ ಕಾಲೇಜಿನಲ್ಲಿ ದಾಖಲಾಗಿ, ವಿದ್ಯಾಭ್ಯಾಸ ಮುಂದುವರಿಸಿರುವ ಬಗ್ಗೆ ಹಾಗೂ ಆತನು ಈ ವಿದ್ಯಾರ್ಥಿ ವೇತನದ ಉದ್ದೇಶಕ್ಕಾಗಿ ಖಾತೆ ತೆರೆದಿರುವ ಬ್ಯಾಂಕ್‌ನ ವಿವರಗಳನ್ನು ಪರಿಶೀಲಿಸಿ ಖಚಿತ ಪಡಿಸಿಕೊಂಡು, ಸದರಿ ಮಾಹಿತಿಯನ್ನು **"online" ಮೂಲಕವೇ** ಇಲಾಖೆಗೆ **ದಿನಾಂಕ:31-10-2015ರ** ಒಳಗೆ ಸಲ್ಲಿಸುವಂತೆ**( Forward ಮಾಡುವಂತೆ)** ಕೋರಲಾಗಿದೆ.

ನೋಡಲ್ ಅಧಿಕಾರಿಗಳು,
ಪದವಿ ಪೂರ್ವ ಶಿಕ್ಷಣ ಇಲಾಖೆ.